ಮಾನ್ಯ ಅಧ್ಯಕ್ಷಣಿಯವರೇ, ದಕ್ಷಿಣ ಕನ್ನಡ ಜಿಲ್ಲೆ ಮೂಡಬಿದ್ರೆ ತಾಲ್ಲೂಕು ಇರುವೈಲು ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡುವ ಬಗ್ಗೆ ಜಿಲ್ಲಾಪರಿಷತ್ತಿನಿಂದ ೧೯೯೧-೯೨ನೇ ಸಾಲಿನಲ್ಲಿ ಪ್ರಸ್ತಾವನೆಯು ಬಂದಿರುವುದಿಲ್ಲ. ೧೯೯೧-೯೨ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಕುಂದಾಪುರ ತಾಲ್ಲೂಕು ಅಮಾಸೆಬೈಲು ಮತ್ತು ಸುಳ್ಯ ತಾಲ್ಲೂಕು ಅರಂತೋಡು ಗ್ರಾಮಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಪ್ರಸ್ತಾವನೆ ಬಂದಿದ್ದು ಸ್ಥಳೀಯ ಶಾಸಕರಿಂದ ಹಾಗೂ ಸಾರ್ವಜನಿಕರಿಂದ ಬಂದ ಮನವಿಗಳನ್ನು ಪರಿಶೀಲಿಸಿ ಸದರಿ ಜಿಲ್ಲೆಯ ಮಂಗಳೂರು ತಾಲ್ಲೂಕು ಬೆಂಗರೆ ಕಸಬಾ-ಬಜಾರ್ ಮತ್ತು ಬಂಟ್ವಾಳ್ ತಾಲ್ಲೂಕು ನಾವೂರು ಸ್ಥಳಗಳಿಗೆ ಪ್ರಾಥಮಿಕ ಆರೋಗ್ಯ ಕೆಂದ್ರಗಳನ್ನು ಮಂಜೂರು ಮಾಡಲಾಗಿದೆ. ದಕ್ಷಿಣ ಕನ್ನಡ ಜಿಲ್ಲಾಪರಿಷತ್ತಿನಿಂದ ಇರುವೈಲು ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಪ್ರಸ್ತಾವನೆಯು ಬಂದಲ್ಲಿ ಪರಿಶೀಲಿಸಲಾಗುವುದು.

ಬೆಂಗಳೂರು ಜಯನಗರ ವಾಣಿಜ್ಯ ಸಂಕೀರ್ಣದಲ್ಲಿರುವ ದಕ್ಷಿಣ ರೈಲ್ವೆ ಅಡ್ವಾನ್ಸ್ ಬುಕ್ಕಿಂಗ್ ಕೇಂದ್ರದಲ್ಲಿ ಕಂಪ್ಯೂಟರ್ ವ್ಯವಸ್ಥೆಯನ್ನು ಜಾರಿಗ ತರುವ ಬಗ್ಗೆ

ಶ್ರೀ ರಾಮಲಿಂಗರೆಡ್ಡಿ (ಜಯನಗರ):- ಮಾನ್ಯ ಅಧ್ಯಕ್ಷರೇ, ಬೆಂಗಳೂರು ಜಯನಗರದ ವಾಣಿಜ್ಯ ಸಂಕೀರ್ಣದಲ್ಲಿ ಒಂದು ದಕ್ಷಿಣ ರೈಲ್ವೆ ಅಡ್ವಾನ್ಸ್ ಬುಕ್ಕಿಂಗ್ ಕೌಂಟರ್ ಇದ್ದು, ಅದರಿಂದ ದಕ್ಷಿಣ ಭಾಗದ ಜನರಿಗೆ ಯಾವ ಪ್ರಮಾಣದ ಅನುಕೂಲವಾಗ ಬೇಕಾಗಿತ್ತೋ ಆ ಪ್ರಮಾಣದಲ್ಲಿ ಆಗುತ್ತಿಲ್ಲ. ಅಲ್ಲಿ ಕೇವಲ ರೈಲುಗಳ ಸ್ಥಳಗಳನ್ನು ಕಾದಿರಿಸಲಾಗುವುದು. ಇದರ ಜೊತೆಗೆ ಮೊದಲನೇ ದರ್ಜೆಗೆ ಸ್ಥಳವನ್ನು ಕಾದಿರಿಸಲಾಗುವುದಿಲ್ಲ. ಈ ಕೌಂಟರಿನ ವೇಳಾ ಸಮಯವು ಸಹ ಸಾರ್ವಜನಿಕರಿಗೆ ಅನುಕೂಲವಾಗುವುದಿಲ್ಲ. ಆದ್ದರಿಂದ ಈ ಕೌಂಟರನ್ನು ವಿಸ್ತರಿಸಿ ಎಲ್ಲಾ ರೈಲುಗಳಿಗೂ ಸ್ಥಳವನ್ನು ಕಾದಿರಿಸಲು ವ್ಯವಸ್ತೆ ಮಾಡಿ ಎಲ್ಲ ದರ್ಜೆಗಳಿಗೂ ಮುಂಗಡ ಬುಕ್ಕಿಂಗ್ ವ್ಯವಸ್ಥೆಯನ್ನು ಏರ್ಪಡಿಸಬೇಕು. ಇದರ ಜೊತೆಗೆ ಕಂಪ್ಯೂಟರ್ ವ್ಯವಸ್ಥೆಯನ್ನು ಜಾರಿಗೆ ತರಬೇಕು. ಆದ್ದರಿಂದ ಕೇಂದ್ರದ ರೈಲ್ವೆ ಸಚಿವರೊಂದಿಗೆ ವ್ಯವಹರಿಸಿ ಕ್ರಮ ತೆಗೆದುಕೊಳ್ಳಲು ಮುಖ್ಯ ಮಂತ್ರಿಗಳನ್ನು ಕೇಳಿಕೊಳ್ಳುತ್ತೇನೆ.

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):- ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ರಾಮಲಿಂಗರೆಡ್ಡಿಯವರ ಸೂಚನೆಗೆ ಈ ರೀತಿ ಹೇಳಿಕೆಯನ್ನು ಕೊಡಬಯಸುತ್ತೇನೆ "ಬೆಂಗಳೂರು ಜಯನಗರ ವಾಣಿಜ್ಯ ಸಂಕೀರ್ಣದಲ್ಲಿರುವ ದಕ್ಷಿಣ ರೈಲ್ವೆ ಕೌಂಟರ್‌ನಲ್ಲಿ ಸೇವೆಯ ವೇಳೆಯನ್ನು ವಿಸ್ತರಿಸಲು ಹಾಗೂ ಪ್ರಥಮ ದರ್ಜೆ ಪ್ರಯಾಣಗಳನ್ನು ಒಳಗೊಂಡಂತೆ ಎಲ್ಲಾ ರೈಲುಗಳ ಸ್ಥಳವನ್ನು ಕಾದಿರಿಸಲು ಕ್ರಮವನ್ನು ತೆಗೆದುಕೊಳ್ಳಲು ಕೇಂದ್ರ ರೈಲ್ವೆ ಸಚಿವರೊಡನೆ ವ್ಯವಹರಿಸಲಾಗುವುದು...

ಚನ್ನಪಟ್ಟಣ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ಕೆಲವು ಬಸ್ಸುಗಳ ಸಂಚಾರ ನಿಲ್ಲಿಸಿದ್ದರಿಂದ ಜನರಿಗೆ ಉಂಟಾದ ಅನಾನುಕೂಲತೆ ಮತ್ತು ಇನ್ನೂ ಹೆಚ್ಚು ಬಸ್ಸುಗಳನ್ನು ಹಾಕಲು ಮನವಿ.

Sri. C.M. Lingappa:- On behalf of Sri Sadath Ali Khan, I would like to ask the Hon'ble Minister for Transport and Wakf